**File No.DPARAR/69/AAR/2019-DPARAR TRG-DPAR AR SEC**

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019-20ನೇ ಸಾಲಿನ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011, ದಿನಾಂಕ: 20-11-2012 ಹಾಗೂ ತಿದ್ದುಪಡಿ ಆದೇಶ ದಿನಾಂಕ:15-04-2013.
2. ದಿನಾಂಕ: 30-10-2019ರ ಸುತ್ತೋಲೆ ಸಂಖ್ಯೆ: ಸಿಆಸುಇ 69 ಇಆಸು 2019.
3. ದಿನಾಂಕ: 14.01.2020 ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡವಳಿ

***

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶಗಳಲ್ಲಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅತ್ಯುನ್ನತ ಸೇವೆಗೈದ/ಸಾಧನೆಗೈದ ರಾಜ್ಯ ಸರ್ಕಾರಿ ಅಧಿಕಾರಿಗಳು/ನೌಕರರಿಗೆ "ಸರ್ವೋತ್ತಮ ಸೇವಾ ಪ್ರಶಸ್ತಿ" ಯನ್ನು ಪ್ರತಿ ವರ್ಷವೂ ನೀಡುವ ಬಗ್ಗೆ ಯೋಜನೆಯನ್ನು ಜಾರಿಗೆ ತರಲಾಗಿದೆ. ಈ ಯೋಜನೆಯಲ್ಲಿ ಜಿಲ್ಲಾವಾರು, ಇಲಾಖಾವಾರು ಮತ್ತು ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗಳನ್ನು ಪ್ರಧಾನ ಮಾಡುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಿದೆ.

ಮೇಲೆ ಓದಲಾದ (2)ರ ಸುತ್ತೋಲೆಯಲ್ಲಿ ರಾಜ್ಯ ಮತ್ತು ಇಲಾಖಾವಾರು ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನವನ್ನು online ಮೂಲಕ ಸಲ್ಲಿಸಲು ಜಾಲತಾಣವನ್ನು ಅಭಿವೃದ್ಧಿ ಪಡಿಸಲಾಗಿದೆ ಹಾಗೂ ಈ ಜಾಲತಾಣದ ಮೂಲಕ 2019-20ನೇ ಸಾಲಿನ ಇಲಾಖಾ ಹಾಗೂ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನವನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.

ಮೇಲೆ ಓದಲಾದ (3)ರ ಆಯ್ಕೆ ಸಮಿತಿ ಸಭೆಯಲ್ಲಿ 2019-20ನೇ ಸಾಲಿನಲ್ಲಿ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ online ಮೂಲಕ ಸ್ವೀಕೃತವಾದ 75 ನಾಮ ನಿರ್ದೇಶನಗಳಲ್ಲಿ, 22 ನಾಮ ನಿರ್ದೇಶನಗಳಿಗೆ ಮಾತ್ರ ಸಂಬಂಧಿಸಿದ ಇಲಾಖಾ ಕಾರ್ಯದರ್ಶಿಗಳಿಂದ ಅನುಮೋದಿತವಾಗಿರುವುದನ್ನು ಹಾಗೂ ಈ ಅಧಿಕಾರಿ/ನೌಕರರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ/ಲೋಕಾಯುಕ್ತ ತನಿಖೆ/ನ್ಯಾಯಾಂಗ ತನಿಖೆ/ಕ್ರಿಮಿನಲ್ ಮೊಕದ್ದಮೆ ಇವುಗಳು ಬಾಕಿ ಇರುವುದಿಲ್ಲವೆಂದು ನೀಡಿದ ವರದಿಗಳನ್ನು ಆಯ್ಕೆ ಸಮಿತಿಯು ಗಮನಿಸಿತು. ಸದರಿ ನಾಮನಿರ್ದೇಶನಗಳಲ್ಲಿ ಸಂಬಂಧಿಸಿದ ಅಧಿಕಾರಿ/ನೌಕರರು ಸಲ್ಲಿಸಿದ ವಿನೂತನ ಸೇವೆ, ನಾಗರೀಕರಿಗೆ ಅನುಕೂಲಕರವಾದ ಗುಣಾತ್ಮಕ ಸೇವೆ, ಸರ್ಕಾರದ ಯೋಜನೆಗಳನ್ನು ನಾಗರೀಕರಿಗೆ ತಲುಪಿಸುವಲ್ಲಿ ಶ್ರಮಿಸಿರುವ ಬಗ್ಗೆ ಇರುವ ವರದಿಯನ್ನು ಆಯ್ಕೆ ಸಮಿತಿಯು ಕೂಲಂಕಷವಾಗಿ ಪರಿಶೀಲಿಸಿತು. ಇವುಗಳಲ್ಲಿ ಅತ್ಯುತ್ತಮ ಹಾಗೂ ವಿನೂತನ ರೀತಿಯಲ್ಲಿ ಕಾರ್ಯನಿರ್ವಹಿಸಿರುವ 10 ಅಧಿಕಾರಿ/ನೌಕರರನ್ನು 2019-20ನೇ ಸಾಲಿನ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

.....2

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶವನ್ನು ಈ ಕೆಳಕಂಡಂತೆ ಹೊರಡಿಸಲಾಗಿದೆ.

**ಸರ್ಕಾರದ ಆದೇಶದ ಸಂಖ್ಯೆ:ಸಿಆಸುಇ 69 ಇಆಸು 2019,**
**ಬೆಂಗಳೂರು, ದಿನಾಂಕ:20-01-2020.**

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅತ್ಯುನ್ನತ ಸಾಧನೆಗೈದ/ಸೇವೆಗೈದ ಈ ಕೆಳಕಂಡ 10 ರಾಜ್ಯ ಸರ್ಕಾರಿ ಅಧಿಕಾರಿಗಳು/ನೌಕರರಿಗೆ 2019-20ನೇ ಸಾಲಿನ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ಪ್ರತಿ ಪ್ರಶಸ್ತಿಯು ರೂ.25,000/- (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಗಳ ಪ್ರೋತ್ಸಾಹ ಧನ ಹಾಗೂ ಪ್ರಶಸ್ತಿ ಪ್ರಮಾಣ ಪತ್ರವನ್ನು ಒಳಗೊಂಡಿರುತ್ತದೆ.

| ಕ್ರ. ಸಂ. | ನಾಮನಿರ್ದೇಶಿತ ಅಧಿಕಾರಿ / ಸಿಬ್ಬಂದಿಯವರ ಹೆಸರು, ಪದನಾಮ ಶ್ರೀ / ಶ್ರೀಮತಿ | ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆ ಹಾಗೂ ಸ್ಥಳ |
|---|---|---|
| 1 | ಪೀರ್‌ಜಾದೆ ಎನ್.ಎಂ<br>ಜಿಲ್ಲಾಧಿಕಾರಿಗಳ ತಾಂತ್ರಿಕ ಸಹಾಯಕರು | ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ, ಕಂದಾಯ ಇಲಾಖೆ, ಧಾರವಾಡ. |
| 2 | ಎಂ.ಎನ್. ಶ್ರೀವತ್ಸ<br>ಸರ್ಕಾರದ ಅಧೀನ ಕಾರ್ಯದರ್ಶಿ | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬೆಂಗಳೂರು. |
| 3 | ಲಾಚಪ್ಪ ಈರಪ್ಪ ರೂಡಗಿ<br>ಉಪ ನಿರ್ದೇಶಕರು | ಕೃಷಿ ಇಲಾಖೆ<br>ಚಿಕ್ಕೋಡಿ |
| 4 | ಡಾ: ಬಿ.ಎಸ್. ಮಂಜುನಾಥ ಸ್ವಾಮಿ<br>ವಿಶೇಷ ಜಿಲ್ಲಾಧಿಕಾರಿ | ಭೂಮಿ ಉಸ್ತುವಾರಿ ಕೋಶ ಕಂದಾಯ ಇಲಾಖೆ, ಬೆಂಗಳೂರು. |
| 5 | ಪುರುಷೋತ್ತಮ ಕುಮಾರ್. ಕೆ.ಎಂ<br>ಹಿರಿಯ ಸಹಾಯಕ ನಿರ್ದೇಶಕರು | ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಸಮಗ್ರ ಶಿಕ್ಷಣ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು. |
| 6 | ದೀಪಜ ಎಸ್.ಎಂ<br>ಜಂಟಿ ನಿರ್ದೇಶಕರು<br>(ಕೃಷಿ ವಿಸ್ತರಣಾ ತರಬೇತಿ ಮತ್ತು ಇ-ಆಡಳಿತ) | ಆಯುಕ್ತರ ಕಛೇರಿ, ಕೃಷಿ ಇಲಾಖೆ, ಬೆಂಗಳೂರು. |
| 7 | ಡಾ: ಪ್ರಮೋದ್ ಯು.ವಿ<br>ಇ.ಎನ್.ಟಿ ಸ್ಪೆಷಲಿಸ್ಟ್ | ಜನರಲ್ ಹಾಸ್ಪಿಟಲ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕಾರಿ ಪುರ, ಶಿವಮೊಗ್ಗ. |
| 8 | ಅಬೂಬಕರ್ ಎ. ಮುಜಾವರ್<br>ಅಬಕಾರಿ ನಿರೀಕ್ಷಕರು | ಅಬಕಾರಿ ಆಯುಕ್ತರ ಕಛೇರಿ, ವಿಜಯಪುರ. |
| 9 | ಚಂದ್ರಕಾಂತ್ ಮಹದೇವ ಲೋಕರೆ<br>ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು | ಆಯುಕ್ತರ ಕಛೇರಿ, ವಾಣಿಜ್ಯ ತೆರಿಗೆಗಳ ಇಲಾಖೆ, ಬೆಳಗಾವಿ. |
| 10 | ರಾಜೇಶ್ ಹೆಚ್.ಆರ್<br>ಪಂಚಾಯತ್ ಅಭಿವೃದ್ಧಿ ಅಧಿಕಾರಿ | ರಾಜಾನುಕುಂಟೆ ಗ್ರಾಮ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ. |

.....3

ಈ ಪ್ರಶಸ್ತಿಯೊಂದಿಗೆ ನೀಡುವ ಪ್ರೋತ್ಸಾಹ ಧನದ ವೆಚ್ಚವನ್ನು ಲೆಕ್ಕ ಶೀರ್ಷಿಕೆ "3451-00-090-2-34-059- ಸರ್ವೋತ್ತಮ ಸೇವಾ ಪ್ರಶಸ್ತಿ – ಇತರೆ ಖರ್ಚುಗಳು" ಅಡಿಯಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್ ಪಿ 2019, ದಿನಾಂಕ:03-04-2019ರಲ್ಲಿ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎಸ್. ರವಿಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಆಸು-ತರಬೇತಿ)

**ಇವರಿಗೆ**

1. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ರವರಿಗೆ ಇ- ರಾಜ್ಯ ಪತ್ರದಲ್ಲಿ ಪ್ರಕಟಿಸುವ ಬಗ್ಗೆ.
2. ಮಹಾಲೇಖಪಾಲರು,(ಲೆಕ್ಕಪತ್ರ)/ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು /ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
4. ಸರ್ಕಾರದ ಕಾರ್ಯದರ್ಶಿ, ಖಜಾನೆ-2 ಹಾಗೂ ಆಯುಕ್ತರು, ಖಜಾನೆ ಇಲಾಖೆ, 7ನೇ ಮಹಡಿ, ವಾಣಿಜ್ಯ ತೆರಿಗೆ ಇಲಾಖೆಗಳ ಕಟ್ಟಡ ಗಾಂಧಿನಗರ, ಬೆಂಗಳೂರು-09.
5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
6. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರು.
8. ಸಂಬಂಧಪಟ್ಟ ಪ್ರಶಸ್ತಿ ವಿಜೇತರುಗಳಿಗೆ.
9. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
10. ಅಧ್ಯಕ್ಷರು, ಕರ್ನಾಟಕ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
11. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ ಖನಿಜ ಭವನ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12), ವಿಧಾನಸೌಧ.
13. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ 1& 2), ವಿಧಾನ ಸೌಧ.

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.

4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ,
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು) ಯವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ,
6. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ಯವರ ಆಪ್ತ ಸಹಾಯಕರು , ಬಹುಮಹಡಿ ಕಟ್ಟಡ, ಬೆಂಗಳೂರು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.